# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ರಾಮನಗರ.

ಸಿ.ಸಿ. ನಂ.4/2020

CW-3/PW-3

| | | |
|---|---|---|
| ಹೆಸರು | : | ಸಿದ್ದಲಿಂಗಪ್ಪ |
| ತಂದೆಯ ಹೆಸರು | : | ಸಿದ್ದಪ್ಪ |
| ವಯಸ್ಸು | : | 33 ವರ್ಷ |
| ವೃತ್ತಿ | : | ವ್ಯಾಪಾರ |
| ವಾಸ ಸ್ಥಳ | : | ಬೆಂಗಳೂರು ಸಿಟಿ |
| ದಿನಾಂಕ | : | 29-01-2026 |

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-

ಸಾಕ್ಷಿಗೆ ದಿನಾಂಕ 30.05.2019ರ ಅಮಾನತು ಪಂಚನಾಮೆಯ ದೃಢೀಕೃತ ಪ್ರತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದ್ದು, ನನ್ನ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಿರುತ್ತೇನೆ. ದಿನಾಂಕ 30.05.2019ರಂದು ಪೊಲೀಸರು ನನ್ನನ್ನು ಹಾಗೂ ರಂಗಸ್ವಾಮಿಯನ್ನು ಅವರ ಜೀಪಿನಲ್ಲಿ ಬೆಂಗಳೂರಿನ ಸಿಟಿಯಲ್ಲಿರುವ ಒಂದು ಬಂಗಾರದ ಅಂಗಡಿಗೆ ಕರೆದುಕೊಂಡು ಹೋದರು. ಅಲ್ಲಿ ಚಿನ್ನದ ಅಂಗಡಿಯಲ್ಲಿ ವಿಚಾರ ಮಾಡಿ ವಾಪಸ್ ನಮ್ಮನ್ನು ಠಾಣೆಗೆ ಕರೆದುಕೊಂಡು ಬಂದು ಠಾಣೆಯಲ್ಲಿ ಸಹಿ ಹಾಕಿಸಿಕೊಂಡರು. ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ಆಭರಣವನ್ನು ಅಮಾನತು ಪಡಿಸಿಕೊಂಡಿಲ್ಲ. ಸ್ಥಳದಲ್ಲಿ ಪೊಲೀಸರು ಫೋಟೋ ತೆಗೆದರು. ಸದರಿ ಫೋಟೋವನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿದೆ. ನ್ಯಾಯಾಲಯದ ಮುಂದೆ ವಿ.ಸಿ ಮುಖಾಂತರ ಹಾಜರುಪಡಿಸಿರುವ ಆರೋಪಿಯನ್ನು ನಾನು ನೋಡಿಲ್ಲ.

<u>ಸಿ.ಸಿ. ನಂ.4/2020ರಲ್ಲಿ</u>
CW-3/PW-3

(ಮಾನ್ಯ ಎ.ಪಿ.ಪಿ. ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಯನ್ನು ನೀಡಲಾಯಿತು.)

<u>ಪಾಟೀ ಸವಾಲು ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-</u>

ಮೇಲೆ ಹೇಳಿದ ಜುವೆಲ್ಲರಿ ಅಂಗಡಿಯ ಬಳಿ ಆರೋಪಿ ಪೊಲೀಸರು ಹಾಗೂ ನಿಮ್ಮನ್ನು ಕರೆದುಕೊಂಡು ಹೋಗಿ ಈಗ್ಗೆ ಎರಡು ತಿಂಗಳ ಹಿಂದೆ ಹಾಗೂ 20 ದಿನಗಳ ಹಿಂದೆ ನಿಮಗೆ ನಾನು ಮಾರಾಟ ಮಾಡಿರುವ ಚಿನ್ನದ ಸರಗಳನ್ನು ಹಾಜರುಪಡಿಸಿ ಎಂದು ಆರೋಪಿ ಅಂಗಡಿಯ ಮಾಲೀಕರಿಗೆ ತಿಳಿಸಿದ ಮೇರೆಗೆ ಅಂಗಡಿಯ ಮಾಲೀಕರು 28 ಗ್ರಾಂ ತೂಕದ ಚಿನ್ನದ ಸರವನ್ನು ಹಾಗೂ ಇತರೆ ಒಡವೆಗಳನ್ನು ಪೊಲೀಸರ ಮುಂದೆ ಹಾಜರುಪಡಿಸಿದರು, ಅದನ್ನು ಪೊಲೀಸರು ಜಪ್ತಿ ಮಾಡಿಕೊಂಡರು ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನಿಪಿ-7ರಲ್ಲಿರುವ ಆಸಾಮಿಯೇ ಈ ದಿನ ವಿ.ಸಿ. ಮುಖಾಂತರ ಹಾಜರಾಗಿರುವ ಆರೋಪಿ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಸದರಿ ವ್ಯಕ್ತಿ ಚಿನ್ನದ ಅಂಗಡಿಯ ಬಳಿ ಆ ದಿನ ಇದ್ದ ಎಂದರೆ ಸರಿ. ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಹೇಳಿಕೆಯ ಸಂಬಂಧಪಟ್ಟ ಭಾಗವನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿ ಪರಃ-</u>

ಶ್ರೀ ಮುರಳಿ, ವಕೀಲರು ಹಾಜರಾಗಿ ಕಾರಾಗೃಹದ ಅಧಿಕಾರಿಗಳ ಮುಂದೆ ಆರೋಪಿ ಖಾಸಗಿ ವಕೀಲರನ್ನು ನೇಮಿಸಿಕೊಂಡಿರುವುದಾಗಿ ಪತ್ರ ಬರೆದಿದ್ದು, ಅದರ ಪ್ರತಿಯನ್ನು ಡಿ.ಎಲ್.ಎಸ್.ಎ.,ನಿಂದ ನನಗೆ ಕಳುಹಿಸಿರುತ್ತಾರೆ ಎಂದು ತಿಳಿಸಿರುತ್ತಾರೆ.

ಆರೋಪಿಯು ಗಿರೀಶ್ ಎಂಬ ವಕೀಲರನ್ನು ನೇಮಿಸಿಕೊಂಡಿರುವುದಾಗಿ ತಿಳಿಸಿರುತ್ತಾರೆ. ಆದರೆ ಆರೋಪಿಯ ಪರವಾಗಿ ಯಾವುದೇ ವಕೀಲರು ವಕಾಲತ್ ಸಲ್ಲಿಸಿರುವುದಿಲ್ಲ. ಆದ್ದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಲೋಕೇಶ)**
ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು.
ರಾಮನಗರ.